All India Radio: Bangalore
National Bulletin In Kannada
28.05.2026  19.35 hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ
- ಅಕ್ರಮ ಒಳನುಸುಳಿವಿಕೆ ತಡೆಗಟ್ಟಲು ಕೇಂದ್ರ ಸರ್ಕಾರ ಬದ್ಧ - ಗೃಹ ಸಚಿವ ಅಮಿತ್ ಶಾ
- ಪ್ರಧಾನಮಂತ್ರಿ ಆವಾಸ್ ಯೋಜನೆ ಗ್ರಾಮೀಣ್; ಕರ್ನಾಟಕ ಸೇರಿದಂತೆ ೧೨ ರಾಜ್ಯಗಳಿಗೆ ೧೦ ಸಾವಿರದ ೨೧ ಕೋಟಿ ರೂಪಾಯಿ ಅನುದಾನ ಬಿಡುಗಡೆ
- ಸಿಂಗಾಪುರ ಅಧ್ಯಕ್ಷರೊಂದಿಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮಾತುಕತೆ
- ಸಿಂಗಾಪುರ ಓಪನ್ ಬ್ಯಾಡ್ಮಿಂಟನ್; ನಾಲ್ಕು ವಿಭಾಗಗಳಲ್ಲಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ ಭಾರತದ ಆಟಗಾರರು

---

ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಲೋಕಭವನಕ್ಕೆ ಸಂಪುಟ ಸಹೋದ್ಯೋಗಿಗಳೊಂದಿಗೆ ತೆರಳಿದ ಅವರು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅನುಪಸ್ಥಿತಿಯಲ್ಲಿ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪ್ರಭುಶಂಕರ್ ಅವರಿಗೆ ರಾಜೀನಾಮೆ ಪತ್ರ ಸಲ್ಲಿಸಿದ್ದಾರೆ.

ರಾಜೀನಾಮೆ ಪತ್ರವನ್ನು ಸ್ವೀಕರಿಸಿದ ಪ್ರಭುಶಂಕರ್, ಶಿಷ್ಟಾಚಾರದ ಬಗ್ಗೆ ಸಿದ್ದರಾಮಯ್ಯ ಅವರಿಗೆ ಮನವರಿಕೆ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ರಾಜ್ಯಪಾಲರನ್ನು ಮತ್ತೊಮ್ಮೆ ಭೇಟಿಯಾಗಲಿದ್ದಾರೆ.

---

ವರಿಷ್ಠರ ಸೂಚನೆಯಂತೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು ತಮ್ಮ ರಾಜೀನಾಮೆಯನ್ನು ಅಂಗೀಕರಿಸುವ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ ಎರಡು ಬಾರಿ ಮುಖ್ಯಮಂತ್ರಿ, ಎರಡು ಬಾರಿ ವಿರೋಧ ಪಕ್ಷದ ನಾಯಕನಾಗಲು ಅವಕಾಶ ನೀಡಿದ ಕಾಂಗ್ರೆಸ್ ಹಿರಿಯ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

ರಾಷ್ಟ್ರ ರಾಜಕಾರಣದಲ್ಲಿ ಆಸಕ್ತಿ ಇಲ್ಲ, ಹೀಗಾಗಿ ರಾಜ್ಯ ರಾಜಕಾರಣದಲ್ಲೇ ಮುಂದುವರಿಯುವುದಾಗಿ ಸಿದ್ದಾರಾಮಯ್ಯ ತಿಳಿಸಿದ್ದಾರೆ. ರಾಜ್ಯದ ಜನತೆ ಐದು ವರ್ಷಗಳ ಕಾಲ ಶಾಸಕನಾಗಿ ಆಯ್ಕೆ ಮಾಡಿದ್ದಾರೆ. ಇನ್ನೂ ಎರಡು ವರ್ಷ ಅವಧಿ ಇದ್ದು, ಅಲ್ಲಿಯವರೆಗೆ ಕರ್ನಾಟಕ ಹಾಗೂ ಕ್ಷೇತ್ರದ ಜನತೆ ಪರವಾಗಿ ಸೇವೆ ಸಲ್ಲಿಸುವುದಾಗಿ ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ದೀರ್ಘಾವಧಿ ಮುಖ್ಯಮಂತ್ರಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದ್ದು, ೧೭ ಬಾರಿ ಆಯವ್ಯಯ ಮಂಡಿಸಿದ ಕೀರ್ತಿಯೂ ಅವರಿಗೆ ಸಲ್ಲುತ್ತದೆ.

---

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ನಾಳೆಯಿಂದ ಇದೇ ೩೧ರವರೆಗೆ ಕರ್ನಾಟಕ, ಗೋವಾ ಮತ್ತು ಕೇರಳ ರಾಜ್ಯಗಳ ಪ್ರವಾಸ ಕೈಗೊಳ್ಳಲಿದ್ದಾರೆ.

ನಾಳೆ ಬೆಂಗಳೂರಿಗೆ ಆಗಮಿಸಲಿರುವ ಅವರು, ಆರ್ಟ್ ಆಫ್ ಲೀವಿಂಗ್ ಫೌಡೇಷನ್‌ನ ೪೫ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ನಂತರ ಅವರು ದಾವಣಗೆರೆಯಲ್ಲಿ ಬಿಡಿಟಿ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದ ಅಮೃತ ಮಹೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ ೩೦ ರಂದು ಅವರು ಗೋವಾಗೆ ತೆರಳಿ,

ಪಣಜಿಯಲ್ಲಿ ಗೋವಾ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಸಿಎಸ್ಐಆರ್ ರಾಷ್ಟ್ರೀಯ ಸಾಗರ ಶಾಸ್ತ್ರ ಸಂಸ್ಥೆಗೆ ಭೇಟಿ ನೀಡಲಿದ್ದಾರೆ.

ಇದೇ ೩೧ ರಂದು ಉಪರಾಷ್ಟ್ರಪತಿಗಳು ಕರ್ನಾಟಕದ ಬೆಳ್ತಂಗಡಿಯಲ್ಲಿ ಸಿರಿ ಕೈಗಾರಿಕಾ ಪಾರ್ಕ್ ಉದ್ಘಾಟಿಸಲಿದ್ದು, ಬಳಿಕ ಶ್ರೀಕ್ಷೇತ್ರ ಧರ್ಮಸ್ಥಳ ಮಂಜುನಾಥ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಲಿದ್ದಾರೆ. ಅದೇ ದಿನ ಸಂಜೆ ಅವರು ಕೇರಳ ತೆರಳಿ ಕೊಟ್ಟಾಯಂನಲ್ಲಿ ಮಳಿಯಾಳಂ ದಿನ ಪತ್ರಿಕೆ ದೀಪಿಕಾದ ೧೪೦ನೇ ವಾರ್ಷಿಕೋತ್ಸವನ್ನು ಉದ್ಘಾಟಿಸಲಿದ್ದಾರೆ.

---

ದೇಶದಲ್ಲಿರುವ ಪ್ರತಿಯೊಬ್ಬ ಅಕ್ರಮ ನುಸುಳುಕೋರನನ್ನು ಗುರುತಿಸಿ ಹೊರಹಾಕಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಗುಜರಾತ್‌ನ ಗಾಂಧಿನಗರ ಜಿಲ್ಲೆಯ ಸೋನಿಪುರ ಗ್ರಾಮದಲ್ಲಿ ಇಂದು ಆಯೋಜಿಸಲಾಗಿದ್ದ ಸಾರ್ವಜನಿಕ ಸಮಾರಂಭದಲ್ಲಿ ಮಾತನಾಡಿದ ಅವರು, ಪಶ್ಚಿಮ ಬಂಗಾಳದಲ್ಲಿ ಬಾಂಗ್ಲಾದೇಶ ಗಡಿಯಿಂದ ಆಗುತ್ತಿದ್ದ ನುಸುಳುವಿಕೆ ಈಗಾಗಲೇ ಇಳಿಮುಖವಾಗಲು ಪ್ರಾರಂಭಿಸಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಸಚಿವರು, ಗಾಂಧಿನಗರ ಜಿಲ್ಲೆಯಲ್ಲಿ ೩೪೦ ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು.

---

'೨೦೨೯ರ ಮಾರ್ಚ್ ವೇಳೆಗೆ ಎಲ್ಲರಿಗೂ ವಸತಿ' ಕಲ್ಪಿಸುವ ಗುರಿಯೊಂದಿಗೆ ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಆವಾಸ್ ಯೋಜನೆ-ಗ್ರಾಮೀಣ ಅಡಿಯಲ್ಲಿ ಕರ್ನಾಟಕ ಸೇರಿದಂತೆ ೧೨ ರಾಜ್ಯಗಳಿಗೆ ೧೦ ಸಾವಿರದ ೨೧ ಕೋಟಿ ರೂಪಾಯಿಗಳ ಬೃಹತ್ ಅನುದಾನವನ್ನು ಬಿಡುಗಡೆ ಮಾಡಿದೆ.

ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ, ಅಸ್ಸಾಂ, ಛತ್ತೀಸ್‌ಗಢ, ಗುಜರಾತ್, ಹರಿಯಾಣ, ಹಿಮಾಚಲ ಪ್ರದೇಶ, ಜಾರ್ಖಂಡ್, ಕೇರಳ, ಪಂಜಾಬ್, ರಾಜಸ್ಥಾನ,

ತಮಿಳುನಾಡು ಮತ್ತು ಉತ್ತರ ಪ್ರದೇಶ ರಾಜ್ಯಗಳಿಗಾಗಿ ಈ ಅನುದಾನಕ್ಕೆ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅನುಮೋದನೆ ನೀಡಿದರು.

ಯೋಜನೆಯಡಿ ನಿಗದಿಪಡಿಸಲಾಗಿರುವ ೪.೯೫ ಕೋಟಿ ಮನೆಗಳ ಒಟ್ಟು ಗುರಿಯಲ್ಲಿ ಈಗಾಗಲೇ ೩.೯೧ ಕೋಟಿ ಮನೆಗಳಿಗೆ ಮಂಜೂರಾತಿ ಸಿಕ್ಕಿದ್ದು, ೩.೦೫ ಕೋಟಿಗೂ ಹೆಚ್ಚು ಮನೆಗಳ ನಿರ್ಮಾಣ ಪೂರ್ಣಗೊಂಡಿದೆ ಎಂದು ಸಚಿವರು ಮಾಹಿತಿ ನೀಡಿದರು. ಈ ಮನೆಗಳೊಂದಿಗೆ ರಸ್ತೆ, ವಿದ್ಯುತ್, ಕುಡಿಯುವ ನೀರು ಹಾಗೂ ಶೌಚಾಲಯಗಳಂತಹ ಮೂಲಸೌಕರ್ಯಗಳನ್ನು ಒದಗಿಸಲಾಗುತ್ತಿದೆ ಎಂದ ಅವರು, ಮಂಜೂರಾದ ಮನೆಗಳಲ್ಲಿ ಶೇಕಡಾ ೭೫ ರಷ್ಟು ಮಹಿಳೆಯರ ಹೆಸರಿನಲ್ಲಿ ಅಥವಾ ಜಂಟಿ ಮಾಲೀಕತ್ವದಲ್ಲಿದ್ದು, ಇದು ಮಹಿಳಾ ಸಬಲೀಕರಣಕ್ಕೆ ಸಾಕ್ಷಿಯಾಗಿದೆ ಎಂದರು.

ಬಾಕಿ ಇರುವ ಮನೆಗಳ ಅನುಮೋದನೆಯನ್ನು ಜೂನ್ ೩೦ರ ಒಳಗಾಗಿ ಪೂರ್ಣಗೊಳಿಸುವಂತೆ ರಾಜ್ಯಗಳಿಗೆ ಸೂಚಿಸಿದ ಸಚಿವರು, ಜೂನ್ ೫ರ ವಿಶ್ವ ಪರಿಸರ ದಿನದಂದು 'ಏಕ್ ಪೇಡ್ ಮಾ ಕೆ ನಾಮ್' ಅಭಿಯಾನದಡಿ ಪ್ರತಿಯೊಬ್ಬ ಫಲಾನುಭವಿಯೂ ಕನಿಷ್ಠ ಒಂದು ಸಸಿ ನೆಡುವಂತೆ ಕರೆ ನೀಡಿದರು.

---

ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಇಂದು ಸೈಪ್ರಸ್ ಅಧ್ಯಕ್ಷ ನಿಕೋಸ್ ಕ್ರಿಸ್ಟೋ ಡೌಲಿಡಸ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ಸಭೆಯ ವೇಳೆ ಪಶ್ಚಿಮ ಏಷ್ಯಾದಲ್ಲಿನ ಪರಿಸ್ಥಿತಿ ಹಾಗೂ ಮೆಡಿಟರೇನಿಯನ್ ಪ್ರದೇಶದಲ್ಲಿ ಭಾರತದ ಹಿತಾಸಕ್ತಿಗಳ ಕುರಿತು ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

ಇದಕ್ಕೂ ಮುನ್ನ, ಸೈಪ್ರಸ್‌ನ ಲಿಮಾಸೋಲ್‌ನಲ್ಲಿ ಇಂದು ನಡೆದ ಐರೋಪ್ಯ ಒಕ್ಕೂಟ ವಿದೇಶಾಂಗ ಸಚಿವರ ಅನೌಪಚಾರಿಕ 'ಜಿಮ್ನಿಚ್' ಸಭೆಯಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಭಾಗವಹಿಸಿದ್ದರು. ಈ ಉನ್ನತ ಮಟ್ಟದ ಸಭೆಯಲ್ಲಿ ಜಾಗತಿಕವಾಗಿ ಉದಯೋನ್ಮುಖ

ಬಹುಮುಖಿ ವ್ಯವಸ್ಥೆಯಲ್ಲಿನ ಹಿತಾಸಕ್ತಿಗಳು, ಪ್ರಾಯೋಗಿಕ ಸಹಯೋಗಗಳು ಮತ್ತು ಪರಸ್ಪರ ಅಭಿವೃದ್ಧಿಯ ಅವಕಾಶಗಳ ಕುರಿತು ಸುದೀರ್ಘವಾಗಿ ಚರ್ಚಿಸಲಾಯಿತು.

ಸಭೆಯ ಹಿನ್ನೆಲೆಯಲ್ಲಿ ವಿದೇಶಾಂಗ ಸಚಿವರು ಸ್ಪೇನ್, ಉಕ್ರೇನ್, ಸೌದಿ ಅರೇಬಿಯಾ ಸೇರಿದಂತೆ ಹಲವು ದೇಶಗಳ ವಿದೇಶಾಂಗ ಸಚಿವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

---

ಭಾರತದ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಮತ್ತು ಸಿಂಗಾಪುರ ರಕ್ಷಣಾ ಕಾರ್ಯದರ್ಶಿ ಜೋಸೆಫ್ ಲಿಯಾಂಗ್ ಅವರ ಜಂಟಿ ಅಧ್ಯಕ್ಷತೆಯಲ್ಲಿ ಸಿಂಗಾಪುರದಲ್ಲಿಂದು ೧೬ನೇ ರಕ್ಷಣಾ ನೀತಿ ಸಂವಾದ ನಡೆಯಿತು.

---

ಭಾರತ ಮತ್ತು ದಕ್ಷಿಣ ಕೊರಿಯಾ ದೇಶಗಳ ನಡುವಿನ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದವನ್ನು ಮೇಲ್ದರ್ಜೆಗೇರಿಸುವ ಭಾಗವಾಗಿ ಡಿಜಿಟಲ್ ವ್ಯಾಪಾರ, ಪೂರೈಕೆ ಸರಪಳಿ ಹಾಗೂ ಕೈಗಾರಿಕಾ ಸಹಭಾಗಿತ್ವದ ಕುರಿತು ಚರ್ಚಿಸಲು ಪ್ರತ್ಯೇಕ ಉಪ-ಗುಂಪುಗಳನ್ನು ರಚಿಸಲು ನಿರ್ಧರಿಸಲಾಗಿದೆ.

ಕೇಂದ್ರ ವಾಣಿಜ್ಯ ಸಚಿವ ಪೀಯೂಷ್ ಗೋಯಲ್ ಮತ್ತು ಕೊರಿಯಾದ ವಾಣಿಜ್ಯ ಸಚಿವ ಯೆಯೋ ಹನ್-ಕೂ ಅವರು ಏಪ್ರಿಲ್ ೨೦ರಂದು ಸಹಿ ಮಾಡಿದ್ದ ಜಂಟಿ ಪ್ರಕಟಣೆಗೆ ಅನುಗುಣವಾಗಿ ನವದೆಹಲಿಯಲ್ಲಿ ಈ ಮಾತುಕತೆಗಳು ಜರುಗಿವೆ.

---

ಸಂವಾದ, ಚರ್ಚೆ, ಒಮ್ಮತ ಮತ್ತು ಭಿನ್ನಾಭಿಪ್ರಾಯಗಳಿಂದ ಪ್ರಜಾಪ್ರಭುತ್ವವು ಸದೃಢವಾಗಿ ಬೆಳೆಯುತ್ತದೆ ಎಂದು ಲೋಕಸಭೆಯ ಸಭಾಧ್ಯಕ್ಷ ಓಂ ಬಿರ್ಲಾ ತಿಳಿಸಿದ್ದಾರೆ.

ದೆಹಲಿ ವಿಧಾನಸಭೆಯಲ್ಲಿ ೧೯೨೪ ರಿಂದ ೧೯೩೦ ರವರೆಗಿನ ಕೇಂದ್ರ ಶಾಸನ ಸಭೆಯ ೪೦೭ ಕಲಾಪಗಳ ನಡಾವಳಿಗಳನ್ನೊಳಗೊಂಡ ೮೯ ಸಂಪುಟಗಳ ಬೃಹತ್ ಸಂಕಲನವನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಈ ಸಂಗ್ರಹವು ಮುಂದಿನ ಪೀಳಿಗೆಗೆ ಅಮೂಲ್ಯ ಮಾರ್ಗದರ್ಶಿಯಾಗಲಿದೆ ಎಂದರು.

---

ದೇಶದ ಕಠಿಣವಾಗಿ ಪರಿಶ್ರಮಿಸುವ ರೈತರ ನಿರಂತರ ಶ್ರಮದಿಂದಾಗಿ ಭಾರತದಲ್ಲಿಂದು ಸಾಕಷ್ಟು ಪ್ರಮಾಣದಲ್ಲಿ ಆಹಾರ ಧಾನ್ಯಗಳ ದಾಸ್ತಾನು ಲಭ್ಯವಿದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಮುಂಗಾರು ಅಭಿಯಾನ ೨೦೨೫ರ ರಾಷ್ಟ್ರೀಯ ಕೃಷಿ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಈ ವರ್ಷ ದೇಶದ ಆಹಾರ ಧಾನ್ಯ ಉತ್ಪಾದನೆ ಕಳೆದ ವರ್ಷಕ್ಕಿಂತ ಶೇಕಡ ೫.೩ರಷ್ಟು ಹೆಚ್ಚಳವಾಗಿದ್ದು, ೩೭೯ ದಶಲಕ್ಷ ಟನ್ ದಾಟುವ ಅಂದಾಜಿದೆ ಎಂದರು.

---

ಸಿಂಗಾಪುರ ಮುಕ್ತ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಇಂದು ಭಾರತದ ಆಟಗಾರರು ನಾಲ್ಕು ವಿಭಾಗಗಳಲ್ಲಿ ಉತ್ತಮ ಪ್ರದರ್ಶನ ನೀಡಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

ಮಹಿಳಾ ಸಿಂಗಲ್ಸ್‌ನಲ್ಲಿ ಪಿ.ವಿ. ಸಿಂಧು, ಪುರುಷರ ಸಿಂಗಲ್ಸ್‌ನಲ್ಲಿ ಲಕ್ಷ್ಯ ಸೇನ್, ಪುರುಷರ ಡಬಲ್ಸ್ ಜೋಡಿ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಹಾಗೂ ಮಿಶ್ರ ಡಬಲ್ಸ್‌ನ ಧ್ರುವ್ ಕಪಿಲಾ ಮತ್ತು ತನಿಷಾ ಕ್ರಾಸ್ಟೋ ಜೋಡಿ ಕ್ವಾರ್ಟರ್ ಫೈನಲ್‌ಗೆ ಪ್ರವೇಶಿಸಿದ್ದಾರೆ.

__________ ಮುಕ್ತಾಯ __________